ಶ್ರೀ ಹೆಚ್.ಜಿ ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಕ್ರಮ ಕೈಗೊಳ್ಳಲಾಗುವುದು.

ಕೊಪ್ಪಳ ತಾಲ್ಲೂಕಿನಲ್ಲಿರುವ ಶಿಕ್ಷಣ ಸಮಸ್ಯೆ

2239 - ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಉನ್ನತ ಶಿಕ್ಷಣ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ತಾಲ್ಲೂಕಿನ ನಗರದಲ್ಲಿ ಉನ್ನತ ಶಿಕ್ಷಣದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಕೊಪ್ಪಳ ತಾಲ್ಲೂಕಿನ ವಿದ್ಯಾರ್ಥಿಗಳನ್ನು ತಮ್ಮ ಪ್ರೌಢಶಿಕ್ಷಣದ ನಂತರದ ಉನ್ನತ ಶಿಕ್ಷಣಕ್ಕಾಗಿ ಗದಗ-ಗಂಗಾವತಿ ಮುಂತಾದ ನಗರಗಳಿಗೆ ಹೋಗುತ್ತಿರುವುದು ಸರ್ಕಾರ ಗಮನಿಸಿದೆಯೇ?

ಇ) ಹಾಗಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹರಿಸಲು ಕೊಪ್ಪಳ ನಗರದಲ್ಲಿ ಅವಶ್ಯವಾಗಿರುವ ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ಹಾಗಿದ್ದರೆ, ಯಾವಾಗ ಕ್ರಮ ಕೈಗೊಳ್ಳಲಾಗುವುದೇ? (ವಿವರ ನೀಡುವುದು)

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಹೌದು.

ಇ) 1996-97ನೇ ಶೈಕ್ಷಣಿಕ ಸಾಲಿನಲ್ಲಿ ಪರಿಶೀಲಿಸಲಾಗುವುದು.

ಕಿರಿಯ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳಿಗೆ ಗ್ರಾಮೀಣ ಅಭ್ಯರ್ಥಿಗಳಿಗೆ ಕೃಪಾಂಕ.

2240 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಸರ್ಕಾರಿ ಕಿರಿಯ ಕಾಲೇಜುಗಳಲ್ಲಿ ಖಾಲಿಯಿರತಕ್ಕ ಉಪನ್ಯಾಸಕರ, ಹುದ್ದೆಗಳೆಷ್ಟು?

ಆ) ಇವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಈ ಹುದ್ದೆಗಳನ್ನು ಭರ್ತಿ ಮಾಡುವಾಗ ಗ್ರಾಮೀಣ ಅಭ್ಯರ್ಥಿಗಳಿಗೆ ಕೃಪಾಂಕ ನೀಡಲಾಗುವುದೇ?

ಈ) ಇಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?